ಭೂಮಾಪನ ಸಮಸ್ಯೆಗಳು

236(595); ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು)

ಅ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನಲ್ಲಿ ಭೂ ಮಾಪಕರುಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಖಾಲಿ ಇರುವ ಭೂಮಾಪಕರ ನೇಮಕಕ್ಕೆ ಸರ್ಕಾರ ಕ್ರಮ ಕೈಗೊಂಡಿರುವ ಕ್ರಮವೇನು;

ಇ) ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರಗಳನ್ನು ಒದಗಿಸುವುದು?

ಶ್ರೀ ವಿ,ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ಬಂದಿದೆ

ಆ) ಭೂಮಾಪನ ಇಲಾಖೆಯಲ್ಲಿ ಖಾಲಿ ಇದ್ದ ಹಾಗೂ ಹೊಸದಾಗಿ ಮಂಜೂರಾದ ಒಟ್ಟು 1834 ಹುದ್ದೆಗಳ ಪೈಕಿ 1769 ಹುದ್ದೆಗಳಿಗೆ ನೇಮಕಾತಿ ಮಾಡಿ ದಿನಾಂಕ:05/11/2013 ರಿಂದ ಆರು ತಿಂಗಳ ವೃತ್ತಿ ಬುನಾದಿ ತರಬೇತಿ ನೀಡಲಾಗುತ್ತಿದ್ದು ಈ ತರಬೇತಿಯು ಪೂರ್ಣಗೊಂಡ ನಂತರ ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕು ಕಛೇರಿಯಲ್ಲಿ 16 ಭೂಮಾಪಕರ ಹುದ್ದೆಗಳು ಮಂಜೂರಾಗಿದ್ದು ಇವುಗಳಲ್ಲಿ 13 ಹುದ್ದೆಗಳು ಭರ್ತಿಯಾಗಿವೆ. ಮತ್ತು 3 ಹುದ್ದೆಗಳು ಖಾಲಿ ಇರುತ್ತವೆ.